# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಕ್ಷಿಣ ವಲಯ, ವಿಜಯನಗರ ಉಪ ವಿಭಾಗ

## ವಾರ್ಡ್ ನಂ. 157 : ವಿಜಯನಗರ

ದಿನಾಂಕ:28.11.2022 ರಂದು 12.30 ಗಂಟೆಗೆ ಶ್ರೀ.ಡಿ.ಕೆ ಬಾಬು ನೋಡಲ್ ಅಧಿಕಾರಿ, ವಾರ್ಡ್ ನಂ.157 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿಜಯನಗರ ಉಪ ವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡವಳಿಗಳು.

**ಸಭೆಯಲ್ಲಿ ಹಾಜರಿದ್ದವರು:**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1. | ಶ್ರೀ.ಡಿ.ಕೆ.ಬಾಬು | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿ. |
| 2. | ಶ್ರೀ.ಎಸ್.ಕೆ.ಹೇಮಂತ್ ಕುಮಾರ್ | ಸದಸ್ಯ ಕಾರ್ಯದರ್ಶಿ ವಾರ್ಡ್ ಸಂಖ್ಯೆ: 157. |
| 3. | ಶ್ರೀಮತಿ.ಸುಜಾತ | ಹಿರಿಯ ಆರೋಗ್ಯ ಪರಿವೀಕ್ಷಕರು. |
| 4. | ಶ್ರೀಮತಿ.ಸಪ್ನ | ಕಿರಿಯ ಆರೋಗ್ಯ ಪರಿವೀಕ್ಷಕರು. |
| 5. | ಶ್ರೀ.ಶೋಭಾ.ಎಂ.ಎನ್ | SWM AEE. |
| 6. | ಶ್ರೀಮತಿ.ಸುಮಿತ್ರ ಬಿ.ಎಸ್ | ಮೌಲ್ಯಮಾಪಕರು. |
| 7. | ಶ್ರೀಮತಿ.ಸರಸ್ವತಿ | L/ W ವಾ–157. |
| 8. | ಶ್ರೀ.ಕೃಷ್ಣ ಮೂರ್ತಿ | ತೋಟಗಾರಿಕೆ ಇಲಾಖೆ. |
| 9. | ಶ್ರೀ.ಲಿಂಗಯ್ಯ.ಎಂ | ಆರ್.ಐ ವಾ–157. |
| 10. | ಕುಮಾರಿ.ತನುಜ | ವಾ–157 (ಸ.ಅ) |
| 11. | ಕುಮಾರಿ.ವಿದ್ಯಾ ಹಿರೇಮಠ | NGO |

**: ನಡಾವಳಿಯ ವರದಿ :**

ಕಾರ್ಯದರ್ಶಿಗಳಾದ ಶ್ರೀ.ಎಸ್.ಕೆ.ಹೇಮಂತ್ ಕುಮಾರ್ ರವರು ಸಭೆಗೆ ಹಾಜರಾದ ನೋಡಲ್ ಅಧಿಕಾರಿಯವರಿಗೆ ಹಾಗೂ ಅಧಿಕಾರಿಗಳು ಮತ್ತು ನೌಕರರಿಗೆ ಸ್ವಾಗತ ಕೋರಿದರು.

1. De-Silting ಕಾಮಗಾರಿಯ ಬಗ್ಗೆ ಚರ್ಚಿಸಲಾಗಿ, ದಿ:15.12.2022 ರೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸುವುದಾಗಿ ಕಾರ್ಯದರ್ಶಿ ರವರು ನೋಡಲ್ ಅಧಿಕಾರಿಯವರ ಗಮನಕ್ಕೆ ತಂದರು.

   **ಕ್ರಮ: ಸಹಾಯಕ ಅಭಿಯಂತರರು ವಾರ್ಡ್ ನಂ.123.**

2. G.T Mall ಕಂದಾಯ ವಸೂಲಾತಿ ಬಗ್ಗೆ ಚರ್ಚಿಸಲಾಗಿ, Pannel Advocate ರವರನ್ನು ಬದಲಾಯಿಸಿ ನ್ಯಾಯಾಲಯದಲ್ಲಿ ಹೂಡಿರುವ ದಾವೆಯನ್ನು ಮುಂದೂಡುತ್ತಿರುವುದಾಗಿ ಕಂದಾಯ ಅಧಿಕಾರಿಗಳು, ನೋಡಲ್ ಅಧಿಕಾರಿಯವರ ಗಮನಕ್ಕೆ ತಂದರು. ಅದಕ್ಕೆ ನೋಡಲ್ ಅಧಿಕಾರಿ ರವರು Pannel Advocate ರವರನ್ನು ಬದಲಾಯಿಸಲು ನಿಮ್ಮ ಮೇಲಾಧಿಕಾರಿಗಳ ಜೊತೆ ಚರ್ಚಿಸಿ, ಕ್ರಮಕೈಗೊಳ್ಳಲು ಕಂದಾಯ ಅಧಿಕಾರಿ ರವರಿಗೆ ಸೂಚಿಸಿದರು.

   **ಕ್ರಮ: ಸಹಾಯಕ ಕಂದಾಯ ಅಧಿಕಾರಿ.**

3. Aadhar Card ನ್ನು Voter ID card ಗೆ Linking ಮಾಡುವ ಬಗ್ಗೆ ಸಾರ್ವಜನಿಕರಿಗೆ ತಿಳುವಳಿಕೆ ನೀಡುವಂತೆ ನೋಡಲ್ ಅಧಿಕಾರಿಯವರ ಮೌಲ್ಯಮಾಪಕರಿಗೆ ಸೂಚಿಸಲಾಗಿ, ಅದಕ್ಕೆ ಮೌಲ್ಯಮಾಪಕರು ವಾರ್ಡ್‌ನಲ್ಲಿ ನಿರಂತರವಾಗಿ ಸಾರ್ವಜನಿಕರಿಗೆ ತಿಳುವಳಿಕೆ ನೀಡುತ್ತಿರುವುದಾಗಿ ನೋಡಲ್ ಅಧಿಕಾರಿ ರವರು ಗಮನಕ್ಕೆ ತಂದರು.

<u>ಕ್ರಮ: ಸಹಾಯಕ ಕಂದಾಯ ಅಧಿಕಾರಿ.</u>

4. Plastic ನಿಷೇಧದ ವಿಚಾರದ ಬಗ್ಗೆ ಚರ್ಚಿಸಲಾಗಿ, ವಿಜಯನಗರ ಮಾರುಕಟ್ಟೆಯ ಅಂಗಡಿ ಮಾಲೀಕರಿಗೆ ಹಾಗೂ ಸಾರ್ವಜನಿಕರಿಗೆ ತಿಳುವಳಿಕೆ ನೀಡುವಂತೆ, ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ನೋಡಲ್ ಅಧಿಕಾರಿಯವರ ಸೂಚಿಸಿದರು.

<u>ಕ್ರಮ: ಕಿರಿಯ ಆರೋಗ್ಯ ಪರಿವೀಕ್ಷಕರು</u>

5. ಉಡುಪಿ ಕಿಚನ್ ಹೊಟೇಲ್ ಬಳಿ ಅಳವಡಿಸಿರುವ Barricadeನ್ನು ತೆರವುಗೊಳಿಸಿ, ಸಾರ್ವಜನಿಕರ ವಾಹನ ಸಂಚಾರಕ್ಕೆ ಅನುಕೂಲಮಾಡಿಕೊಡಲು ಸಭೆಯಲ್ಲಿ ಕೋರಿದರು, ಅದಕ್ಕೆ ಕಾರ್ಯದರ್ಶಿ ರವರು ಪಾಲಿಕೆ ಬಜಾರ್ ಕಾಮಗಾರಿಯನ್ನು ಕೈಗೊಂಡಿರುವುದರಿಂದ, 2 ವಾರಗಳ ನಂತರ Barricadeನ್ನು ತೆರವುಗೊಳಿಸುವುದಾಗಿ ಸಭೆಯ ಗಮನಕ್ಕೆ ತಂದರು.

<u>ಕ್ರಮ: ಸಹಾಯಕ ಅಭಿಯಂತರರು ವಾರ್ಡ್ ನಂ.123.</u>

6. Intensive Cleaning ಕಾಮಗಾರಿಯನ್ನು ನಿರ್ವಹಿಸಿರುವುದಾಗಿ ಕಿರಿಯ ಆರೋಗ್ಯ ಪರಿವೀಕ್ಷಕರು ನೋಡಲ್ ಅಧಿಕಾರಿಯವರ ಗಮನಕ್ಕೆ ತಂದರು. ಅದಕ್ಕೆ ನೋಡಲ್ ಅಧಿಕಾರಿಯವರ ವಾರ್ಡ್‌ನ ಉಳಿದ ರಸ್ತೆಗಳಲ್ಲಿ Intensive Cleaning ಕಾಮಗಾರಿಯನ್ನು ಮುಂದುವರೆಸಲು ಸೂಚಿಸಿದರು.

<u>ಕ್ರಮ: ಕಿರಿಯ ಆರೋಗ್ಯ ಪರಿವೀಕ್ಷಕರು.</u>

7. Namma Clinic ವಿಚಾರದ ಬಗ್ಗೆ ಚರ್ಚಿಸಲಾಗಿ, ಕಾಮಗಾರಿಯನ್ನು ನಿರ್ವಹಿಸುತ್ತಿರುವುದಾಗಿ ಹಿರಿಯ ಆರೋಗ್ಯ ಪರಿವೀಕ್ಷಕರು ನೋಡಲ್ ಅಧಿಕಾರಿಯವರ ಗಮನಕ್ಕೆ ತಂದರು.

<u>ಕ್ರಮ: ಹಿರಿಯ ಆರೋಗ್ಯ ಪರಿವೀಕ್ಷಕರು.</u>

8. Black Spot ಗಳನ್ನು ತೆರವುಗೊಳಿಸುತ್ತಿರುವುದಾಗಿ, ಕಿರಿಯ ಆರೋಗ್ಯ ಪರಿವೀಕ್ಷಕರು ನೋಡಲ್ ಅಧಿಕಾರಿಯವರ ಗಮನಕ್ಕೆ ತಂದರು.

<u>ಕ್ರಮ: ಹಿರಿಯ ಆರೋಗ್ಯ ಪರಿವೀಕ್ಷಕರು.</u>

9. ವಿಜಯನಗರ ವಾರ್ಡ್ ವ್ಯಾಪ್ತಿಗೆ ಬರುವ ಪಾರ್ಕ್‌ಗಳನ್ನು ಸ್ವಚ್ಛಗೊಳಿಸಲು SWM AEE ಶ್ರೀ.ಶೋಭಾ.ಎಂ.ಎನ್ ರವರು ಸಭೆಯಲ್ಲಿ ಕೋರಿದರು, ಅದಕ್ಕೆ ನೋಡಲ್ ಅಧಿಕಾರಿಯವರ ತೋಟಗಾರಿಕೆ ಇಲಾಖೆಯ ಶ್ರೀ.ಕೃಷ್ಣ ಮೂರ್ತಿ ರವರಿಗೆ ಕ್ರಮಕೈಗೊಳ್ಳಲು ಸೂಚಿಸಿದರು.

<u>ಕ್ರಮ: ತೋಟಗಾರಿಕೆ ಇಲಾಖೆ</u>

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡಿನ ಕುಂದುಕೊರತೆಗಳತ್ತ ಗಮನಹರಿಸಿ ವಾರ್ಡ್ ಅಭಿವೃದ್ಧಿ ಪಡಿಸಲು ಸಹಕಾರ ನೀಡಬೇಕೆಂದು ಮನವಿ ಮಾಡಿದರು.

ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ.ಎಸ್.ಕೆ.ಹೇಮಂತ್ ಕುಮಾರ್ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಡಿ.ಕೆ ಬಾಬು)
ನೋಡಲ್ ಅಧಿಕಾರಿ ವಾರ್ಡ್–157

ಸದಸ್ಯ ಕಾರ್ಯದರ್ಶಿ–ವಾರ್ಡ್ 157
ಹಾಗೂ ಸಹಾಯಕ ಅಭಿಯಂತರರು,

ಪ್ರತಿಯನ್ನು:–

1) ಜಂಟಿ ಆಯುಕ್ತರು, ದಕ್ಷಿಣ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
2) ಕಾರ್ಯಪಾಲಕ ಅಭಿಯಂತರರು (ವಿಜಯನಗರ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
3) ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿಜಯನಗರ) ರವರ ಮಾಹಿತಿಗಾಗಿ ಕಳುಹಿಸಿದೆ.
4) ಸಹಾಯಕ ಕಂದಾಯ ಅಧಿಕಾರಿ (ವಿಜಯನಗರ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.157 ರವರ ಮಾಹಿತಿಗಾಗಿ
6) ಸಹಾಯಕ ಅಭಿಯಂತರರು (ವಿದ್ಯುತ್ ಬೆಸ್ಕಾಂ) ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
7) ಸಹಾಯಕ ಅಭಿಯಂತರರು ವಿದ್ಯುತ್ (ಬೀದಿ ದೀಪ) ಬಿಬಿಎಂಪಿ ರವರ ಮಾಹಿತಿಗಾಗಿ ಸೂಕ್ತ ಕ್ರಮಕ್ಕಾಗಿ
8) ಕಛೇರಿ ಕಡತಕ್ಕೆ.